# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/02/ಇಎಸ್‌ಟಿ(9)2018 | 174

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 16-04-2018

## ಹಿಂಬರಹ

ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ: ಕಸಂವಾ 89 ಕೆಒಎಲ್ 2017 ದಿನಾಂಕ:24.03.2018 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
7. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3) ಹಾಗೂ ರಿಜಿಸ್ಟ್ರಾರ್ [ಆಡಳಿತ], ಸಾರ್ವಜನಿಕ ಸಂಪರ್ಕಾಧಿಕಾರಿ
2. ಈ ನಿರ್ದೇಶನಾಲಯದ ಇ.ಎಸ್.ಟಿ.(1) ರಿಂದ (10) ವಿಭಾಗಗಳಿಗೆ ಮಾಹಿತಿಗಾಗಿ
3. ಸಿಡಿಸಿ ವಿಭಾಗಕ್ಕೆ ಮಾಹಿತಿಗಾಗಿ
4. ನಿರ್ದೇಶಕರ ಆಪ್ತ ಶಾಖೆಗೆ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

KK 16/4

Sh-est(9) Endsmnt

C.20=703

**ಕರ್ನಾಟಕ ಸರ್ಕಾರ**

ಸಂಖ್ಯೆ: ಕಸಂವಾ 89 ಕೆಒಎಲ್ 2017

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ:24.03.2018

## ಸುತ್ತೋಲೆ

ಕನ್ನಡ ಭಾಷೆಯನ್ನು ರಾಜ್ಯದ ಎಲ್ಲ ಹಂತಗಳಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸಲು ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಜಾರಿಗೊಳಿಸುವಂತೆ ಸೂಚಿಸಲಾಗಿದೆ.

೧. ಎಲ್ಲಾ ಇಲಾಖೆಗಳ ಅಂತರ್ಜಾಲ ತಾಣದ ಪ್ರಧಾನ ಪುಟ (ಡಿಫಾಲ್ಟ್ ಪೇಜ್) ಕನ್ನಡದಲ್ಲಿ ರೂಪಿಸುವುದು ಮತ್ತು ಒಳಪುಟದ ಮಾಹಿತಿಗಳೆಲ್ಲವೂ ಕನ್ನಡದಲ್ಲಿಯೇ ಇರತಕ್ಕದ್ದು.

೨. ರಾಜ್ಯದೊಳಗಿನ ಎಲ್ಲಾ ಪತ್ರ ವ್ಯವಹಾರಗಳು ಕಡ್ಡಾಯವಾಗಿ ಕನ್ನಡದಲ್ಲಿಯೇ ಇರತಕ್ಕದ್ದು.

೩. ಆಡಳಿತಕ್ಕೆ ಸಂಬಂಧಿಸಿದ ಪತ್ರ ವ್ಯವಹಾರಗಳು, ಕಡತಗಳ ನಿರ್ವಹಣೆ, ತಂತ್ರಾಂಶಗಳ ಅಳವಡಿಕೆ, ಅಂತರ್ಜಾಲ ತಾಣ, ಸಾಮಾಜಿಕ ಜಾಲತಾಣ, ಯೋಜನೆಗಳ ಪ್ರಚಾರ, ಜಾಹಿರಾತು ಇತ್ಯಾದಿ ಎಲ್ಲಾ ಕಚೇರಿ ವ್ಯವಹಾರಗಳಲ್ಲಿ ಕಡ್ಡಾಯವಾಗಿ ಕನ್ನಡ ಯುನಿಕೋಡ್ ತಂತ್ರಾಂಶವನ್ನೇ ಬಳಸತಕ್ಕದ್ದು.

೪. ಸುತ್ತೋಲೆ, ಆದೇಶ, ಸೂಚನಾ ಪತ್ರಗಳು, ಅಧಿಕೃತಜ್ಞಾಪನ, ಅಧಿಸೂಚನೆ, ನಡವಳಿಗಳೆಲ್ಲವನ್ನೂ ಕಡ್ಡಾಯವಾಗಿ ಕನ್ನಡದಲ್ಲಿ ಹೊರಡಿಸತಕ್ಕದ್ದು.

೫. ಎಲ್ಲಾ ಕಾಗದಗಳ ತಲೆಬರಹಗಳು (ಲೆಟರ್ ಹೆಡ್) / ವಿಸಿಟಿಂಗ್ ಕಾರ್ಡ್ ಗಳು, ಮೊಹರುಗಳು, ಲೆಕ್ಕಪತ್ರಗಳು ಮತ್ತು ಎಲ್ಲಾ ವಹಿಗಳು ಕನ್ನಡದಲ್ಲಿರತಕ್ಕದ್ದು.

೬. ಸಚಿವಾಲಯ ಮಟ್ಟದಲ್ಲಿ ಕನ್ನಡ ಅನುಷ್ಠಾನ ವಿಭಾಗವನ್ನು ರಚನೆ ಮಾಡಿ ಕನ್ನಡ ಅನುಷ್ಠಾನದ ಪ್ರಗತಿಯ ವಿವರವನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸುವುದು.

೭. ಕನ್ನಡ ಅಭಿವೃದ್ಧಿಯ ಉದ್ದೇಶಗಳನ್ನು ನೆರವೇರಿಸಲು ಜವಾಬ್ದಾರರನ್ನಾಗಿ ಮಾಡಿರುವ ಅಧಿಕಾರಿಗಳು ಸರ್ಕಾರದ ಸುತ್ತೋಲೆ ಡಿಪಿಎಆರ್ ೨೪ ಪಿಒಎಲ್ ೮೦, ದಿನಾಂಕ: ೫.೧.೧೯೮೨ರನ್ವಯ ಅಧೀನ ಕಚೇರಿ / ಶಾಖೆಗಳ ತನಿಖೆ ಮಾಡಿ ಕನ್ನಡ ಅನುಷ್ಠಾನಕ್ಕೆ ಸಂಬಂಧಿಸಿದ ತನಿಖಾ ವರದಿಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸುವುದು.

೮. ಇಲಾಖಾ ವಾರ್ಷಿಕ ಆಡಳಿತ ವರದಿಗಳು, ವಾರ್ಷಿಕ ವರದಿಗಳು, ಆಯವ್ಯಯ ದಾಖಲೆಗಳು ಮತ್ತು ಇತರೆ ಎಲ್ಲಾ ಅಗತ್ಯ ದಾಖಲಾತಿಗಳು ಕನ್ನಡದಲ್ಲಿರತಕ್ಕದ್ದು ಹಾಗು ವಾರ್ಷಿಕ ವರದಿಗಳ ಪ್ರತಿಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸುವುದು.

೯. ಕನ್ನಡ ಅನುಷ್ಠಾನದ ಪ್ರಗತಿಯ ವರದಿಯನ್ನು ಪ್ರತಿ ತಿಂಗಳು ೫ನೇ ತಾರೀಖಿನ ಒಳಗೆ ನಿಗಧಿತ ನಮೂನೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

೧೦. ಇ-ಟೆಂಡರ್, ಜಾಹಿರಾತು, ದರಪಟ್ಟಿಗಳೆಲ್ಲವನ್ನು ಕಡ್ಡಾಯವಾಗಿ ಕನ್ನಡದಲ್ಲಿ ನೀಡತಕ್ಕದ್ದು.

೧೧. ಪ್ರತಿ ತಿಂಗಳು ನಡೆಯುವ ಇಲಾಖಾ ಪ್ರಗತಿ ಪರಿಶೀಲನಾ ಸಭೆ (ಎಂ.ಎಂ.ಆರ್.)ಯಲ್ಲಿ ಕನ್ನಡ ಅನುಷ್ಠಾನ ಪ್ರಗತಿಯ ವಿಷಯವನ್ನು ಪ್ರಮುಖವಾಗಿ ಚರ್ಚಿಸಿ ಅದರ ನಡವಳಿಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸುವುದು.

೧೨. ನಗರಪಾಲಿಕೆ/ಜಲ್ಲೆಯಾದ್ಯಂತ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿ / ಮುಂಗಟ್ಟುಗಳು / ವಾಣಿಜ್ಯ ಸಂಕೀರ್ಣಗಳ ನಾಮಫಲಕಗಳಲ್ಲಿ ಕನ್ನಡವನ್ನು ಪ್ರಧಾನವಾಗಿ ಅಂದರೆ ಶೇ.೬೦ರಷ್ಟು ಭಾಗ ಕನ್ನಡವನ್ನು ಬಳಸತಕ್ಕದ್ದು.

೧೩. ಡಾ.ಸರೋಜಿನಿ ಮಹಿಷಿ ವರದಿಯನ್ವಯ ಎಲ್ಲಾ ಸರ್ಕಾರಿ ಹಾಗು ಖಾಸಗಿ ಸಂಸ್ಥೆ / ಕಾರ್ಖಾನೆಗಳಲ್ಲಿ / ಉದ್ದಿಮೆಗಳಲ್ಲಿ ಸಿ ಮತ್ತು ಡಿ ವೃಂದದ ನೌಕರರನ್ನು ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವಾಗ ಕಡ್ಡಾಯವಾಗಿ ಕನ್ನಡಿಗರಿಗೆ ಶೇ.೧೦೦ರಷ್ಟು ಮೀಸಲಾತಿ ನೀಡುವುದು. ಪ್ರತಿ ಮೂರು ತಿಂಗಳಿಗೊಮ್ಮೆ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ನಿರ್ದೇಶಕರು/ಉಪ ನಿರ್ದೇಶಕರುಗಳು ಎಲ್ಲಾ ಇಲಾಖೆಗಳಿಂದ ಮಾಹಿತಿಯನ್ನು ಸಂಗ್ರಹಿಸಿ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ವರದಿ ಸಲ್ಲಿಸುವುದು.

೧೪. ಜಿಲ್ಲೆಯಲ್ಲಿರುವ ಕೇಂದ್ರ ಸರ್ಕಾರಿ ಇಲಾಖೆಗಳು/ಉದ್ದಿಮೆಗಳು/ಸಂಸ್ಥೆಗಳಲ್ಲಿ ಕಡ್ಡಾಯವಾಗಿ ತ್ರಿಭಾಷಾ ಸೂತ್ರವನ್ನು ಜಾರಿಗೊಳಿಸಿರುವ ಬಗ್ಗೆ ಜಿಲ್ಲಾಧಿಕಾರಿಗಳು ಕಾಲಿಕ ವರದಿಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸುವುದು.

೧೫. ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ ಸಭೆಗಳಲ್ಲಿ ಕನ್ನಡ ಅನುಷ್ಠಾನಕ್ಕೆ ಸಂಬಂಧಿಸಿದ ವಿಷಯವನ್ನು ಪ್ರಧಾನವಾಗಿ ಚರ್ಚಿಸಿ ಪ್ರತಿ ಜಿಲ್ಲೆಯ ನಡುವಳಿಗಳನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸುವುದು.

೧೬. ಜಿಲ್ಲೆಯ ಪ್ರಮುಖ ರಸ್ತೆಗಳಿಗೆ ನಾಡಿನ ಪ್ರಸಿದ್ಧ ಸಾಹಿತಿಗಳ/ಜಿಲ್ಲೆಯ ಹಿರಿಯ ಹೋರಟಗಾರರ/ಗಣ್ಯ ವ್ಯಕ್ತಗಳ ಹೆಸರನ್ನು ಇಡಲು ಕ್ರಮಕೈಗೊಳ್ಳುವುದು ಮತ್ತು ವೃತ್ತಗಳಲ್ಲಿ ಜಿಲ್ಲೆಗೆ ಸೇವೆ ಸಲ್ಲಿಸಿದ ಹಿರಿಯ ವ್ಯಕ್ತಿಗಳ ಪ್ರತಿಮೆಗಳ ಅನಾವರಣಗೊಳಿಸುವುದು.

---

೧೭. ಬ್ಯಾಂಕ್‌ಗಳಲ್ಲಿ ಜನೋಪಯೋಗಕ್ಕೆ ಬಳಸುವ ಚಲನ್/ನಮೂನೆ/ಅರ್ಜಿಗಳನ್ನು ಕನ್ನಡದಲ್ಲಿಯೂ ಮುದ್ರಿಸತಕ್ಕದ್ದು ಹಾಗೂ ಬ್ಯಾಂಕ್‌ಗಳ ಎಟಿಎಂ ಯಂತ್ರಗಳಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯಗೊಳಿಸುವುದು.

೧೮. ಜಿಲ್ಲೆಯ ಎಲ್ಲ ರಸ್ತೆ/ರಾಜ್ಯ-ರಾಷ್ಟ ಹೆದ್ದಾರಿಗಳಲ್ಲಿರುವ ನಾಮಫಲಕಗಳು, ಹೆದ್ದಾರಿ ಫಲಕಗಳು, ಮಾರ್ಗಸೂಚಿಗಳು ಹಾಗೂ ವಿಷಯ ಸೂಚಿಗಳನ್ನು ಕನ್ನಡದಲ್ಲಿ ಬರೆಸುವುದು.

೧೯. ಕನ್ನಡ ಭಾಷಾ ಅಧಿನಿಯಮ 2015 ರನ್ವಯ ಎಲ್ಲ ಶಾಲೆಗಳಲ್ಲಿ ಕನ್ನಡವನ್ನು 1 ರಿಂದ 10ನೇ ತರಗತಿಯವರಿಗೆ ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಕಡ್ಡಾಯವಾಗಿ ಭೋದಿಸುವ ಕುರಿತಂತೆ ಜಿಲ್ಲೆಯ ಎಲ್ಲ ಶಾಲೆಗಳಿಂದ ಕ್ರೂಢೀಕೃತ ವರದಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸುವುದು.

೨೦. ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ(ಕೆಡಿಪಿ) ಸಭೆಗಳಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸದಸ್ಯರು ಹಾಗೂ ಜಿಲ್ಲಾ ಜಾಗೃತಿ ಸಮಿತಿ ಸದಸ್ಯರಿಗೆ ಪ್ರವೇಶಾವಕಾಶ ಒದಗಿಸುವುದು ಮತ್ತು ಅವರೊಂದಿಗೆ ಜಿಲ್ಲೆಯಾದ್ಯಂತ ಕನ್ನಡ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೈಗೊಳ್ಳಬಹುದಾದ ಕಾರ್ಯಗಳ ಬಗ್ಗೆ ಚರ್ಚಿಸಿ ಸಲಹೆ ಪಡೆಯುವುದು.

G. Annapurna

(ಜಿ.ಅನ್ನಪೂರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ
(ಆಡಳಿತ ಕನ್ನಡ)

ಇವರಿಗೆ

1. ಎಲ್ಲಾ ಸರ್ಕಾರದ ಅಪರಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
2. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
4. ಎಲ್ಲಾ ನಿಗಮ /ಮಂಡಳಿಗಳ ವ್ಯವಸ್ಥಾಪಕ ನಿರ್ದೇಶಕರುಗಳು
5. ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು
6. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು.

ಸಂಖ್ಯೆ:ಕಅಪ್ರಾ/ಕಾ೨/ಕ.ಜಾ.ಪ.೨೭/೨೦೧೫-೧೬ ದಿನಾಂಕ:೨೬-೦೩-೨೦೧೮

**ಟಿಪ್ಪಣಿ**

ವಿಷಯ:- ಕನ್ನಡ ಭಾಷೆಯನ್ನು ಆಡಳಿತದಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ಕುರಿತು.

ಉಲ್ಲೇಖ:- ಸರ್ಕಾರದ ಪತ್ರ ಸಂಖ್ಯೆ : ಕಸಂವಾ 89 ಕೆಬಿಎಲ್ 2017 ದಿ:24-03-2018

-*-*-*-*-

ಕನ್ನಡ ಭಾಷೆಯನ್ನು ಆಡಳಿತದ ಎಲ್ಲಾ ಹಂತಗಳಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಉಲ್ಲೇಖದಲ್ಲಿ ಹೊರಡಿಸಿರುವ ಸುತ್ತೋಲೆಯ ಪ್ರತಿಯನ್ನು ಕಳುಹಿಸಿಕೊಡಲಾಗಿದೆ. ಈ ಸುತ್ತೋಲೆಯ ಆಶಯಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ತಾವು ಪ್ರಾಮಾಣಿಕ ಪ್ರಯತ್ನವನ್ನು ಮಾಡಲು ಕೋರುತ್ತಾ, ಸೂಚಿತ ಮಾಹಿತಿಗಳನ್ನು ಕಡ್ಡಾಯವಾಗಿ ಕಾಲಕಾಲಕ್ಕೆ ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಬೇಕೆಂದು ಕೋರಲಾಗಿದೆ.

ಕಾರ್ಯದರ್ಶಿ
ಕನ್ನಡ ಅಭಿವೃದ್ಧಿ ಪ್ರಾಧಿಕಾರ

ಗೆ,

1. ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು /ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
2. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
4. ಎಲ್ಲಾ ನಿಗಮ/ಮಂಡಳಿಗಳ ವ್ಯವಸ್ಥಾಪಕ ನಿರ್ದೇಶಕರುಗಳು
5. ಕಛೇರಿ ಪ್ರತಿ